ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ವಿಜ್ಞಾನ ಗುಡ್ಡಗಳಿಗೆ ಕೇಂದ್ರ ಸರ್ಕಾರದಿಂದ ನೆರವು ಬಂದಿರುವ ಬಗ್ಗೆ

ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-

1435 (1681) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜ್ಞಾನ ಗುಡ್ಡ ಅಂದರೇನು ; ರಾಜ್ಯದಲ್ಲಿ ಎಷ್ಟು ವಿಜ್ಞಾನ ಗುಡ್ಡಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವಿಜ್ಞಾನ ಗುಡ್ಡಗಳ ಅಭಿವೃದ್ಧಿಗೆ ಯಾವ ಯಾವ ಮೂಲಗಳಿಂದ ಎಷ್ಟು ಹಣ ಬಿಡುಗಡೆ ಆಗಿದೆ ; ವಿಜ್ಞಾನ ಗುಡ್ಡವಾರು ಮಾಹಿತಿ ನೀಡುವುದು ;

(ಇ) ಬಿಡುಗಡೆಯಾದ ಹಣದಲ್ಲಿ ಎಷ್ಟು ಹಣ ಖರ್ಚಾಗಿದೆ ; ಉಳಿದಿರುವ ಹಣವೆಷ್ಟು ; ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು;

(ಈ) ಈ ವಿಜ್ಞಾನ ಗುಡ್ಡಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು ; ವಿಜ್ಞಾನ ಗುಡ್ಡಗಳವಾರು ಮಾಹಿತಿ ನೀಡುವುದು ;

(ಉ) ತುಮಕೂರು ಜಿಲ್ಲೆಯ ವಿಜ್ಞಾನ ಗುಡ್ಡದ ಅಭಿವೃದ್ಧಿಗೆ ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಬಂದಿರುವ ಅನುದಾನವೆಷ್ಟು ; ಖರ್ಚಾಗಿರುವ ಅನುದಾನವೆಷ್ಟು ? (ವಿವರವಾದ ಮಾಹಿತಿ ನೀಡುವುದು)